# ಕರ್ನಾಟಕ ವಿಧಾನ ಪರಿಷತ್ತು

1) ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 744 (852)

2) ಸದಸ್ಯರ ಹೆಸರು : ಶ್ರೀ ಅರವಿಂದ ಕುಮಾರ್ ಅರಳಿ
(ವಿಧಾನ ಸಭೆಯಿಂದ ಚುನಾಯಿತರಾದವರು)

3) ಉತ್ತರಿಸುವ ದಿನಾಂಕ : 28-09-2020

4) ಉತ್ತರಿಸುವವರು : ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಸಚಿವರು

| ಕ್ರಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಬೀದರ್ ತಾಲ್ಲೂಕಿನಲ್ಲಿ ಬ್ಲ್ಯಾಕ್ ಬಕ್‌ಗಳು ಹೆಚ್ಚಿನ ಸಂಖ್ಯೆಯಲ್ಲಿದ್ದು, ಅವುಗಳನ್ನು ರಕ್ಷಿಸಲು ಅದಕ್ಕಾಗಿ ಬೀದರ್‌ನಲ್ಲಿ ಬ್ಲ್ಯಾಕ್ ಬಕ್ಸ್ ಧಾಮ ನಿರ್ಮಿಸುವ ಅವಶ್ಯಕತೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಧಾಮ ನಿರ್ಮಿಸುವುದು ಯಾವಾಗ; ಇಲ್ಲದಿದ್ದರೆ, ಇದಕ್ಕೆ ಕಾರಣವೇನು; | ಬೀದರ್ ಪ್ರಾದೇಶಿಕ ಅರಣ್ಯ ವಿಭಾಗದಲ್ಲಿ, ಬ್ಲ್ಯಾಕ್ ಬಕ್‌ಗಳು (ಕೃಷ್ಣಮೃಗಗಳು) ಹೆಚ್ಚಿನ ಸಂಖ್ಯೆಯಲ್ಲಿರುವುದು ಗಮನಕ್ಕೆ ಬಂದಿರುತ್ತದೆ. ಪ್ರಸ್ತುತ ಬೀದರ್‌ನಲ್ಲಿ ಬ್ಲ್ಯಾಕ್ ಬಕ್ಸ್ (ಕೃಷ್ಣಮೃಗ) ಧಾಮ ನಿರ್ಮಿಸುವ ಯಾವುದೇ ಪ್ರಸ್ತಾವನೆ ಇರುವುದಿಲ್ಲ. ಆದಾಗ್ಯೂ, ಬ್ಲ್ಯಾಕ್ ಬಕ್ಸ್ (ಕೃಷ್ಣಮೃಗ) ಧಾಮ ನಿರ್ಮಿಸುವ ಕುರಿತಂತೆ ಪ್ರಸ್ತಾವನೆ ಸ್ವೀಕೃತವಾದಲ್ಲಿ, ಈ ಬಗ್ಗೆ ಪರಿಶೀಲಿಸಿ, ನಿಯಮಾನುಸಾರ ಅಗತ್ಯ ಕ್ರಮ ಕೈಗೊಳ್ಳಲಾಗುವುದು. |
| ಆ) | ಜಿಲ್ಲೆಯಲ್ಲಿ ಅತೀ ಹೆಚ್ಚು ನವಿಲುಗಳು ಇರುವುದರಿಂದ ರೈತರ ಬೆಳೆಗಳಿಗೆ ತೊಂದರೆಯಾಗುತ್ತಿದ್ದು, ಅವುಗಳನ್ನು ಉಳಿಸಿ ಬೆಳೆಸಿ ನವಿಲುಧಾಮ ನಿರ್ಮಿಸುವ ಅವಶ್ಯಕತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ನವಿಲುಧಾಮ ನಿರ್ಮಿಸುವುದು ಯಾವಾಗ? | ಬೀದರ್ ಪ್ರಾದೇಶಿಕ ಅರಣ್ಯ ವಿಭಾಗದಲ್ಲಿ ನವಿಲುಗಳು ಹೆಚ್ಚಿನ ಸಂಖ್ಯೆಯಲ್ಲಿರುವುದು ಗಮನಕ್ಕೆ ಬಂದಿರುತ್ತದೆ. ಪ್ರಸ್ತುತ ಬೀದರ್‌ನಲ್ಲಿ ನವಿಲುಧಾಮ ನಿರ್ಮಿಸುವ ಯಾವುದೇ ಪ್ರಸ್ತಾವನೆ ಇರುವುದಿಲ್ಲ. ಆದಾಗ್ಯೂ, ನವಿಲುಧಾಮ ನಿರ್ಮಿಸುವ ಕುರಿತಂತೆ ಪ್ರಸ್ತಾವನೆ ಸ್ವೀಕೃತವಾದಲ್ಲಿ, ಈ ಬಗ್ಗೆ ಪರಿಶೀಲಿಸಿ, ನಿಯಮಾನುಸಾರ ಅಗತ್ಯ ಕ್ರಮ ಕೈಗೊಳ್ಳಲಾಗುವುದು. |

ಸಂಖ್ಯೆ: ಅಪಜೀ 163 ಎಫ್‌ಡಬ್ಲ್ಯೂಎಲ್ 2020

(ಆನಂದ್ ಸಿಂಗ್)
ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಸಚಿವರು